## ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

<u>ಸಿ.ಸಿ. ಸಂಖ್ಯೆ: **622/2021**</u>

ಫಿರ್ಯಾದಿದಾರರು: ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು : ಎ **1.** ನಿಂಗರಾಜು
ತಂದೆ - ಮಂತಯ್ಯ
ಸುಮಾರು **30** ವರ್ಷ ವಯಸ್ಸು,

ಎ **2.** ವೆಂಕಟೇಶ
ತಂದೆ - ಮಂತಯ್ಯ
ಸುಮಾರು **31** ವರ್ಷ ವಯಸ್ಸು,

ಎ **3.** ಹೊನ್ನಯ್ಯ
ತಂದೆ - ರಾಚಯ್ಯ
ಸುಮಾರು **48** ವರ್ಷ ವಯಸ್ಸು,

ಎ **4.** ರಶ್ಮಿ
ಗಂಡ - ಹೊನ್ನೇಶ
ಸುಮಾರು **18** ವರ್ಷ ವಯಸ್ಸು,

ಎಲ್ಲರ ವಾಸ: ಹುಲ್ಯಾಳು ಗ್ರಾಮ,
ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.

## <u>ದೋಷಾರೋಪಣೆ</u>

ಶ್ರೀಮತಿ ಪೂಜಾ ಬೆಳಕೇರಿ, ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ:

1. ಹುಣಸೂರು ತಾಲ್ಲೂಕು ಬಿಳಿಕೆರೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಹುಲ್ಯಾಳು ಗ್ರಾಮದ ಸಾಕ್ಷಿ 1 ಅವರಿಗೂ ಮತ್ತು 1 ರಿಂದ 4 ನೇ ಆರೋಪಿಗಳಾದ ನಿಮಗೂ ಹುಡುಗಿಯ ವಿಚಾರದಲ್ಲಿ ವೈಮನಸ್ಸಿದ್ದು , ದಿನಾಂಕ 06.09.2020 ರಂದು ಸಂಜೆ 7.00 ಗಂಟೆ ಸಮಯದಲ್ಲಿ ಹುಲ್ಯಾಳು ಗ್ರಾಮದಲ್ಲಿರುವ ಸಾಕ್ಷಿ 1 ಅವರ ಮನೆಯ ಮುಂಭಾಗದ ರಸ್ತೆಯಲ್ಲಿ ಸಾಕ್ಷಿ 2 ಅವರು ಇದ್ದಾಗ 1 ಮತ್ತು 2 ನೇ ಆರೋಪಿಗಳಾದ ನೀವುಗಳು ಸಾಕ್ಷಿ 2 ಅವರಿಗೆ ಏಕಾಏಕಿ ಕೈಯಿಂದ ಮೈಕೈಗೆ ಹೊಡೆದು ನೋವುಂಟು ಮಾಡಿದ್ದು, 3 ನೇ ಆರೋಪಿಯಾದ ನೀವು ಸಾಕ್ಷಿ 2 ಅವರಿಗೆ ಕೈಯಿಂದ ಮೈಕೈಗೆ ಹೊಡೆದಿದ್ದು, ಜಗಳ ಬಿಡಿಸಲು ಬಂದ ಸಾಕ್ಷಿ 3 ಅವರಿಗೂ ಸಹ 3 ನೇ ಆರೋಪಿಯಾದ ನೀವು ಕೈಯಿಂದ ಅವರ ಬಲಪಾದ , ಬಲಮಂಡಿ ಮತ್ತು ಎಡಹೆಬ್ಬೆರಳಿಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟುಮಾಡಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಎರಡನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 4 ನೇ ಆರೋಪಿಗಳಾದ ನೀವುಗಳು ಅಪರಾಧ ಎಸಗುವ ಸಮಾನ ಉದ್ದೇಶದಿಂದ, 1 ನೇ ಆರೋಪಿಯಾದ ನೀವು ಸಾಕ್ಷಿ1 ಅವರನ್ನು ಹಿಡಿದು ಎಳೆದಾಡಿ ಅವರಿಗೆ ಅಕ್ರಮ ತಡೆಯನ್ನುಂಟುಮಾಡಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

3. ಮೂರನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 4 ನೇ ಆರೋಪಿಗಳಾದ ನೀವುಗಳು ಅಪರಾಧ ಎಸಗುವ ಸಮಾನ ಉದ್ದೇಶದಿಂದ, 1 ನೇ ಆರೋಪಿಯಾದ ನೀವು ಸಾಕ್ಷಿ 1 ಶ್ರೀಮತಿ ರತ್ನಮ್ಮ ಅವರ ಸೀರೆಯನ್ನು ಹಿಡಿದು ಎಳೆದಾಡಿ ಚರಂಡಿಗೆ ಕೆಡವಿ ಸಾಕ್ಷಿ 1 ಅವರಿಗೆ ಅವಮಾನವಾಗುವಂತೆ ವರ್ತಿಸಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ

ಸಂಹಿತೆ ಕಲಂ 354 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

4. ಕೊನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 4 ನೇ ಆರೋಪಿಗಳಾದ ನೀವುಗಳು ಅಪರಾಧ ಎಸಗುವ ಸಮಾನ ಉದ್ದೇಶದಿಂದ, 1 ನೇ ಆರೋಪಿಯಾದ ನೀವು ಸಾಕ್ಷಿ 1 ಅವರಿಗೆ ನೀನು ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ ನಿಮ್ಮನ್ನು ಕೊಲೆ ಮಾಡುತ್ತೇನೆ ಎಂದು ಕೊಲೆ ಬೆದರಿಕೆ ಹಾಕಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆಪಾದನೆಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆಪಾದನೆಗಳಿಗೆ ಆರೋಪಿಗಳಾದ ನೀವುಗಳು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

**(ಪೂಜಾ ಬೆಳಕೇರಿ)**

ದಿನಾಂಕಃ **26.12.2023**

ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಮತ್ತು
ಪ್ರ**.**ದ**.**ನ್ಯಾ**.**ದಂಡಾಧಿಕಾರಿಗಳು**,** ಹುಣಸೂರು**.**

ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ
ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

<u>ಸಿ.ಸಿ. ಸಂಖ್ಯೆ: **622/2021**</u>

ಫಿರ್ಯಾದಿದಾರರು: ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು : ಎ **4.** ರಶ್ಮಿ
ಗಂಡ - ಹೊನ್ನೇಶ

<u>ಭಾರತೀಯ ದಂಡ ಸಂಹಿತೆ ಕಲಂ **240(2)** ರ ಅಡಿಯಲ್ಲಿ ಆರೋಪಿಯ ಹೇಳಿಕೆ</u>

ಪ್ರಶ್ನೆ: ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ**?**

ಉತ್ತರ:

ಪ್ರಶ್ನೆ: ತಪ್ಪೊಪ್ಪಿಕೊಳ್ಳುವಿರೋ**,** ವಿಚಾರಣೆಯಾಗಬೇಕೆನ್ನುವಿರೋ**?**

ಉತ್ತರ:

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು**,** ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ**.**

**(**ಪೂಜಾ ಬೆಳಕೇರಿ**)**
ದಿನಾಂಕ: **26.12.2023** ಅಪರ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ**.**ದಂ**.**ನ್ಯಾ**..** ದಂಡಾಧಿಕಾರಿಗಳು**,** ಹುಣಸೂರು**.**